## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಅಮೃತಕುಮಾರ ಸಾಲಂಕಿ, ಹಿಂದಿನ ಕಾರ್ಯಪಾಲಕ ಇಂಜಿನಿಯರ್(ಹಾಲಿ ನಿವೃತ್ತ), ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು ಇವರು ದಿನಾಂಕ:04.01.2020 ರಲ್ಲಿ ವಿಧಿಸಿರುವ ದಂಡನೆಯ ಕುರಿತು ಸಲ್ಲಿಸಿರುವ ಮೇಲ್ಮನವಿ ಅರ್ಜಿ– ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 603 ಜಿಪ 2014, ದಿನಾಂಕ:04.01.2020.
2. ಶ್ರೀ ಅಮೃತಕುಮಾರ ಸಾಲಂಕಿ ಇವರ ಪುನರ್ ಪರಿಶೀಲನಾ ಅರ್ಜಿ ದಿನಾಂಕ:04.03.2020.

******

**ಪ್ರಸ್ತಾವನೆ,**

ಶ್ರೀ ಅಮೃತಕುಮಾರ ಸಾಲಂಕಿ, ಹಿಂದಿನ ಕಾರ್ಯಪಾಲಕ ಇಂಜಿನಿಯರ್(ಹಾಲಿ ನಿವೃತ್ತ), ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು ಇವರು 2003–04 ನೇ ಸಾಲಿನಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು ಇಲ್ಲಿನ ಕಾರ್ಯಪಾಲಕ ಇಂಜಿನಿಯರ್ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ ಉರ್ದು ಶಾಲಾ ಕೊಠಡಿಗಳ ನಿರ್ಮಾಣದ ಉದ್ದೇಶಕ್ಕೆ ಬಿಡುಗಡೆಯಾದ ಅನುದಾನವನ್ನು ಸಕ್ಷಮ ಪ್ರಾಧಿಕಾರದ ಅನುಮೋದನೆ ಇಲ್ಲದೆ ಮಾರ್ಗಪಲ್ಲಟ ಮಾಡಿರುತ್ತಾರೆ ಎಂಬ ಆರೋಪಗಳಿಗೆ ಸಂಬಂಧಿಸಿದಂತೆ ಇವರ ವಿರುದ್ಧ ಸಾಬೀತಾದ ಆರೋಪಗಳಿಗೆ ಅನುಗುಣವಾಗಿ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1958 ರ ನಿಯಮ 214(1)(ಎ) ರನ್ವಯ ಅವರ ನಿವೃತ್ತಿ ವೇತನದಲ್ಲಿ ಪ್ರತಿ ತಿಂಗಳು ರೂ.1000/–(ಒಂದು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಒಂದು ವರ್ಷದ ಅವಧಿಗೆ ತಡೆಹಿಡಿಯುವ ದಂಡನೆಯನ್ನು ಮೇಲೆ ಓದಲಾದ ಕ್ರಮಾಂಕ (1) ರ ದಿನಾಂಕ:04.01.2020 ರ ಆದೇಶದಲ್ಲಿ ವಿಧಿಸಲಾಗಿದೆ.

ಶ್ರೀ ಅಮೃತಕುಮಾರ ಸಾಲಂಕಿ ಇವರು ತಮಗೆ ವಿಧಿಸಲಾದ ದಂಡನೆಯ ಕುರಿತು ಮೇಲೆ ಓದಲಾದ ಕ್ರಮಾಂಕ(2)ರ ದಿನಾಂಕ:04.03.2020 ರಲ್ಲಿ ಮೇಲ್ಮನವಿ ಸಲ್ಲಿಸಿ ತಾವು ಯಾವುದೇ ಕರ್ತವ್ಯಲೋಪ ಎಸಗಿರುವುದಿಲ್ಲವೆಂದು, ತಮ್ಮಿಂದ ಯಾವುದೇ ರೀತಿಯ ಆರ್ಥಿಕ ನಷ್ಟ ಉಂಟಾಗಿರುವುದಿಲ್ಲವೆಂದು, ಹಾಗಾಗಿ ಸದರಿ ಪ್ರಕರಣವನ್ನು ಪುನರ್ ಪರಿಶೀಲಿಸಿ, ತಮಗೆ ವಿಧಿಸಲಾದ ದಂಡನೆಯನ್ನು ರದ್ದುಪಡಿಸುವಂತೆ ಕೋರಿರುತ್ತಾರೆ.

ಸರ್ಕಾರವು ಶ್ರೀ ಅಮೃತಕುಮಾರ ಸಾಲಂಕಿ ಇವರ ಮೇಲ್ಮನವಿಯನ್ನು ಪರಿಶೀಲಿಸಿರುತ್ತದೆ. ಕರ್ನಾಟಕ ನಾಗರೀಕ ಸೇವಾ(ವ.ನಿ.ಮೇ) ನಿಯಮಾವಳಿಗಳ ನಿಯಮ 26 ರಡಿಯಲ್ಲಿ ಪುನರ್ ಪರಿಶೀಲನಾ ಅರ್ಜಿ ಸಲ್ಲಿಸಲು ಈ ಹಿಂದೆ ಇಲಾಖಾ ವಿಚಾರಣೆ ಸಂದರ್ಭದಲ್ಲಿ ಸಲ್ಲಿಸದ ಅಥವಾ ಪ್ರಮುಖವಾದ ಯಾವುದೇ ಹೊಸ ದಾಖಲೆ/ಸಾಕ್ಷಿ ಲಭ್ಯವಾದಲ್ಲಿ ಅಂತಹ ಮಾಹಿತಿಯನ್ನು ಆಧರಿಸಿ, ಆರೋಪಗಳ ನಿರ್ಣಯವನ್ನು ಮಾರ್ಪಾಡು ಮಾಡುವ ಅಂಶಗಳಿದ್ದಲ್ಲಿ ಅದನ್ನು ಪರಿಗಣಿಸಿ ಪುನರ್ ಪರಿಶೀಲಿಸಬೇಕಾಗುತ್ತದೆ.

ಶ್ರೀ ಅಮೃತಕುಮಾರ ಸಾಲಂಕಿ ಇವರು ಸ.ಕಾ.ಇಂ ಆದ ಶ್ರೀ ವಿ.ಜೆ.ರಾಯ್ಕರ್ ಇವರೊಂದಿಗೆ ಶಾಮೀಲಾಗಿ, ನಿಗಧಿತ ಉದ್ದೇಶಕ್ಕೆ ಬಿಡುಗಡೆಯಾದ ಹಣವನ್ನು ಈ ಹಿಂದೆಯೇ ಅನುಷ್ಠಾನಗೊಳಿಸಿದ್ದ ಕಾಮಗಾರಿಗಳಿಗೆ ಪಾವತಿ ಮಾಡಿ, ನಿಗಧಿತ ಉದ್ದೇಶಕ್ಕೆ ವೆಚ್ಚ ಮಾಡಲಾಗಿದೆ ಎಂದು ಸುಳ್ಳು ವಿವರಗಳನ್ನು ನಮೂದಿಸಿ ಹಣ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸಿ, ಕರ್ತವ್ಯ ಲೋಪವೆಸಗಿರುವ

ಆರೋಪವು ಸದರಿಯವರ ವಿರುದ್ಧ ಸ್ಪಷ್ಟವಾಗಿ ಸಾಬೀತಾಗಿರುತ್ತದೆ. ಆದ್ದರಿಂದ, ಶ್ರೀಯುತರ ವಿರುದ್ಧ ಸಾಭೀತಾದ ಆರೋಪದ ಗಂಭೀರತೆಗೆ ಅನುಗುಣವಾಗಿ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1958 ರ ನಿಯಮ 214(1)(ಎ) ರನ್ವಯ ಅವರ ನಿವೃತ್ತಿ ವೇತನದಲ್ಲಿ ಪ್ರತಿ ತಿಂಗಳು ರೂ.1000/- (ಒಂದು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಒಂದು ವರ್ಷದ ಅವಧಿಗೆ ತಡೆಹಿಡಿಯುವ ದಂಡನೆಯನ್ನು ವಿಧಿಸಿ ಆದೇಶಿಸಲಾಗಿದೆ.

ಶ್ರೀ ಅಮೃತಕುಮಾರ ಸಾಲಂಕಿ ಇವರು ಸಲ್ಲಿಸಿರುವ ಮೇಲ್ಮನವಿಯಲ್ಲಿನ ಅಂಶಗಳಿಗೆ ಪೂರಕವಾಗಿ ಪರಿಗಣಿಸಬಹುದಾದ ಯಾವುದೇ ಮಾಹಿತಿ/ದಾಖಲೆ/ಸಾಕ್ಷಿಗಳನ್ನು ಸಲ್ಲಿಸದೇ ಇರುವುದರಿಂದ ಈ ಹಿಂದೆ ವಿಧಿಸಿರುವ ದಂಡನೆಯನ್ನು ಮಾರ್ಪಡಿಸಬಹುದಾದ ಯಾವುದೇ ಅಂಶಗಳು ಕಂಡು ಬರುವುದಿಲ್ಲ. ಆದ್ದರಿಂದ ಶ್ರೀ ಅಮೃತಕುಮಾರ ಸಾಲಂಕಿ ಇವರು ಸಲ್ಲಿಸಿರುವ ಮೇಲ್ಮನವಿಯನ್ನು ತಿರಸ್ಕರಿಸಲು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 603 ಜಿಪಅ 2014, ಬೆಂಗಳೂರು ದಿನಾಂಕ:04.04.2020</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಸರ್ಕಾರವು ಶ್ರೀ ಅಮೃತಕುಮಾರ ಸಾಲಂಕಿ, ಹಿಂದಿನ ಕಾರ್ಯಪಾಲಕ ಇಂಜಿನಿಯರ್(ಹಾಲಿ ನಿವೃತ್ತ), ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು ಇವರು ಆದೇಶ ಸಂಖ್ಯೆ: ಗ್ರಾಅಪ 603 ಜಿಪ 2014, ದಿನಾಂಕ:04.01.2020 ರಲ್ಲಿ ವಿಧಿಸಿರುವ ದಂಡನೆಯನ್ನು ರದ್ದುಪಡಿಸುವ ಸಂಬಂಧ ಮೇಲೆ ಓದಲಾದ ಕ್ರಮಾಂಕ (2) ರ ದಿನಾಂಕ:04.03.2020 ರಂದು ಸಲ್ಲಿಸಿರುವ ಮೇಲ್ಮನವಿಯನ್ನು ತಿರಸ್ಕರಿಸಿ, ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

04/04/2020

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**<u>ಇವರಿಗೆ:</u>**

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು.
4. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು-ಎ ಮತ್ತು ಸಿ).
5. ಶ್ರೀ ಅಮೃತ ಕುಮಾರ ಸಾಲಂಕಿ, ನಿವೃತ್ತ ಕಾರ್ಯಪಾಲಕ ಇಂಜಿನಿಯರ್, ನಂಬರ್ 589, 21 ನೇ ಮುಖ್ಯ ರಸ್ತೆ, 2ನೇ ಮಹಡಿ, 4 ನೇ 'ಟಿ' ಬಡಾವಣೆ, ಜಯನಗರ, ಬೆಂಗಳೂರು.
6. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
7. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ ಉಪ ಕಾರ್ಯದರ್ಶಿ/ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು
8. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.